## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರಿ ನೌಕರರು ಖಾಸಗಿ ಆಸ್ಪತ್ರೆಗಳಲ್ಲಿ ಪಡೆದ ವೈದ್ಯಕೀಯ ವೆಚ್ಚವನ್ನು ಮರುಪಾವತಿಸಲು ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರ ಮಿತಿಯನ್ನು ರೂ. 1.00 ಲಕ್ಷಗಳಿಂದ ರೂ. 2.00 ಲಕ್ಷಗಳಿಗೆ ಹೆಚ್ಚಿಸುವ ಕುರಿತು.

**ಓದಲಾಗಿದೆ:** ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 34 ಎಸ್‌ಎಂಆರ್ 2011, ದಿ:28.09.2011.

* * * * *

**ಪ್ರಸ್ತಾವನೆ:**

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ನಿಯಮ 8 ಮತ್ತು ನಿಯಮ 14(3)ಕ್ಕೆ ಸಂಬಂಧಪಟ್ಟ ಷೆಡ್ಯೂಲ್ I ಹಾಗೂ IIರಲ್ಲಿ ಸೂಚಿಸಿರುವ ಸರ್ಕಾರದಿಂದ ಮಾನ್ಯತೆ ಹೊಂದಿರುವ ಆಸ್ಪತ್ರೆಗಳನ್ನು ಹೊರತುಪಡಿಸಿ, ಖಾಸಗಿ ಆಸ್ಪತ್ರೆಗಳಲ್ಲಿ ಸರ್ಕಾರಿ ನೌಕರರು ಪಡೆಯುವ ವೈದ್ಯಕೀಯ ಚಿಕಿತ್ಸಾ ವೆಚ್ಚವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ, ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರು ನೀಡುವ ಅಭಿಪ್ರಾಯದಂತೆ ಎಲ್ಲಾ ವೃಂದದ ಅಧಿಕಾರಿ/ನೌಕರರ ರೂ. 1.00 ಲಕ್ಷದವರೆಗಿನ ವೈದ್ಯಕೀಯ ವೆಚ್ಚವನ್ನು ಮರುಪಾವತಿಸಲು ನಿಯಮ 14ನ್ನು ಸಡಿಲಿಸಲು ನಿಯಮ 31ರಲ್ಲಿ ಪ್ರದತ್ತವಾದ ಸಿ.ಆ.ಸು. ಇಲಾಖೆ ಚಲಾಯಿಸುತ್ತಿದ್ದ ಅಧಿಕಾರವನ್ನು ಸಂಬಂಧಪಟ್ಟ ಆಡಳಿತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಪ್ರತ್ಯಾಯೋಜಿಸಲಾಗಿರುತ್ತದೆ.

ಪ್ರಸ್ತುತ, ವೈದ್ಯಕೀಯ ಚಿಕಿತ್ಸಾ ವೆಚ್ಚಗಳು ದುಬಾರಿಯಾಗಿದ್ದು, ಮಾನ್ಯತೆ ಪಡೆಯದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದ ಅರ್ಹತಾ ಮೊತ್ತ ರೂ. 1.00 ಲಕ್ಷಗಳನ್ನು ಮೀರಿದ ಮರುಪಾವತಿ ಪ್ರಕರಣಗಳು ನಿಯಮ ಸಡಿಲಿಕೆಗಾಗಿ ಆಡಳಿತ ಇಲಾಖೆಗಳ ಮೂಲಕ ಸಿ.ಆ.ಸು. ಇಲಾಖೆ(ಸೇವಾ ನಿಯಮಗಳು)ಗೆ ಬರುತ್ತಿರುವ ಪ್ರಸ್ತಾವನೆಗಳು ಹೆಚ್ಚಾಗುತ್ತಿದ್ದು, ಇದರಿಂದಾಗಿ, ವೈದ್ಯಕೀಯ ವೆಚ್ಚದ ಮರುಪಾವತಿಯು ವಿಳಂಬವಾಗಿ ಸರ್ಕಾರಿ ನೌಕರರಿಗೆ ಅನಾನುಕೂಲವಾಗುತ್ತಿರುವ ಹಿನ್ನೆಲೆಯಲ್ಲಿ, ಆಡಳಿತ ಇಲಾಖೆಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ರೂ. 1.00 ಲಕ್ಷದವರೆಗಿನ ಅಧಿಕಾರ ಮಿತಿಯನ್ನು ರೂ.2.00 ಲಕ್ಷಗಳಿಗೆ ಹೆಚ್ಚಿಸಲು ತೀರ್ಮಾನಿಸಲಾಗಿದ್ದು, ಅದರಂತೆ, ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 31 ಎಸ್‌ಎಂಆರ್ 2014, ಬೆಂಗಳೂರು, ದಿ:05.11.2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರದಿಂದ ಮಾನ್ಯತೆ ಹೊಂದಿರುವ ಆಸ್ಪತ್ರೆಗಳನ್ನು ಹೊರತುಪಡಿಸಿ, ಮಾನ್ಯತೆ ಪಡೆಯದ ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳಲ್ಲಿ ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರುಗಳು ಚಿಕಿತ್ಸೆ ಪಡೆದಂತಹ ಪ್ರಕರಣಗಳ ವೈದ್ಯಕೀಯ ವೆಚ್ಚವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ, ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರು ನೀಡುವ ಅಭಿಪ್ರಾಯದಂತೆ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ನಿಯಮ 31ರಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ನಿಯಮ 14ನ್ನು ಸಡಿಲಿಸಿ ಅರ್ಹತಾ ಮೊತ್ತ ರೂ. 1.00 ಲಕ್ಷದವರೆಗಿನ ವೈದ್ಯಕೀಯ ವೆಚ್ಚವನ್ನು ಮರುಪಾವತಿಸಲು ಸಂಬಂಧಪಟ್ಟ ಆಡಳಿತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿದ್ದ ಅಧಿಕಾರದ ಮಿತಿಯನ್ನು ರೂ. 2.00 ಲಕ್ಷಗಳಿಗೆ (ಎರಡು ಲಕ್ಷ ರೂಪಾಯಿಗಳು) ಹೆಚ್ಚಿಸಲಾಗಿದೆ.

ಮುಂದುವರಿದಿದೆ

2. ಅರ್ಹತಾ ಮೊತ್ತವು ರೂ. 2.00 ಲಕ್ಷಗಳನ್ನು ಮೀರಿದ ಹಾಗೂ ರೂ. 5.00 ಲಕ್ಷಗಳವರೆಗಿನ ಮರುಪಾವತಿ ಪ್ರಕರಣಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಸಿ.ಆ.ಸು. ಇಲಾಖೆರವರಿಗೆ ಸಲ್ಲಿಸುವುದು ಹಾಗೂ ರೂ.5.00 ಲಕ್ಷಗಳನ್ನು ಮೀರಿದ ಹಾಗೂ ಇನ್ನಿತರ ನಿಯಮಗಳ ಸಡಿಲಿಕೆ ಪ್ರಕರಣಗಳನ್ನು ಸಿ.ಆ.ಸು. ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಂದ ಮಾನ್ಯ ಮುಖ್ಯಮಂತ್ರಿಯವರ ಆದೇಶಕ್ಕಾಗಿ ಸಲ್ಲಿಸುವುದು.

3. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು ಮೇಲ್ಕಂಡ ಅಧಿಕಾರ ಪ್ರತ್ಯಾಯೋಜನೆಯನ್ವಯ ಸರ್ಕಾರದಿಂದ ಮಾನ್ಯತೆ ಪಡೆಯದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ರಾಜ್ಯ ಸರ್ಕಾರಿ ನೌಕರರು ಮರುಪಾವತಿಗಾಗಿ ಸಲ್ಲಿಸುವ ಎಲ್ಲಾ ಕ್ಲೇಮುಗಳನ್ನು ಯಾಂತ್ರಿಕವಾಗಿ ಪರಿಗಣಿಸದೇ ಅಪವಾದಾತ್ಮಕವಾದ ಪ್ರಕರಣವಾಗಿ ಪರಿಗಣಿಸಿ, ಸರ್ಕಾರಿ ನೌಕರರ ಮತ್ತು ಅವರ ಕುಟುಂಬದ ಸದಸ್ಯರ ಜೀವನ್ಮರಣದ ಸನ್ನಿವೇಷದಲ್ಲಿ ಹಾಗೂ ಈ ಕೆಳಕಂಡ ತುರ್ತು ಸಂದರ್ಭಗಳಲ್ಲಿ ಮಾನ್ಯತೆ ಪಡೆಯದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಂತಹ ಪ್ರಕರಣಗಳನ್ನು ಮಾತ್ರ ನಿಯಮ ಸಡಿಲಿಸಲು ಪರಿಗಣಿಸುವುದು:-

1. ಸರ್ಕಾರಿ ನೌಕರರು ಅಥವಾ ಅವರ ಕುಟುಂಬ ಸದಸ್ಯರು ಅಪಘಾತಕ್ಕೀಡಾಗಿ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದಾಗ, ಸಾರ್ವಜನಿಕರು ಅಥವಾ ಸ್ನೇಹಿತರು ತುರ್ತು ಚಿಕಿತ್ಸೆಗಾಗಿ ಹತ್ತಿರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಸೇರಿಸಿದ ಸಂದರ್ಭ;
2. ಹಠಾತ್ತಾಗಿ ಅಕಾಲದಲ್ಲಿ ಹೆರಿಗೆ ನೋವು ಕಾಣಿಸಿಕೊಂಡು ಹತ್ತಿರದಲ್ಲಿ ಯಾವುದೇ ಸರ್ಕಾರಿ ಅಥವಾ ಸರ್ಕಾರದಿಂದ ಮಾನ್ಯತೆ ಪಡೆದ ಆಸ್ಪತ್ರೆಗಳು ಇಲ್ಲದಿದ್ದ ಸಂದರ್ಭದಲ್ಲಿ ಕುಟುಂಬದ ಸದಸ್ಯರು ತುರ್ತು ಚಿಕಿತ್ಸೆಗಾಗಿ ಹತ್ತಿರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಸೇರಿಸಿದ ಸಂದರ್ಭ;
3. ಹೃದಯಾಘಾತಕ್ಕೀಡಾಗಿ ತುರ್ತು ಚಿಕಿತ್ಸೆಯ ಅಗತ್ಯವಿದ್ದು, ಹತ್ತಿರದಲ್ಲಿ ಯಾವುದೇ ಸರ್ಕಾರಿ ಅಥವಾ ಸರ್ಕಾರದಿಂದ ಮಾನ್ಯತೆ ಪಡೆದ ಆಸ್ಪತ್ರೆಗಳು ಇಲ್ಲದಿದ್ದ ಸಂದರ್ಭದಲ್ಲಿ ತುರ್ತು ಚಿಕಿತ್ಸೆಗಾಗಿ ಹತ್ತಿರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಸೇರಿದ ಸಂದರ್ಭ;
4. ಬೆಂಕಿ ಅಪಘಾತಕ್ಕೀಡಾಗಿ ತುರ್ತು ಚಿಕಿತ್ಸೆಯ ಅಗತ್ಯವಿರುವ ಸಂದರ್ಭದಲ್ಲಿ ಹತ್ತಿರದ ಖಾಸಗಿ ಆಸ್ಪತ್ರೆಗೆ ದಾಖಲು ಮಾಡಿದ ಸಂದರ್ಭ;
5. ಸರ್ಕಾರಿ ನೌಕರರ ಅಥವಾ ಅವರ ಕುಟುಂಬದ ಸದಸ್ಯರಿಗೆ ಜೀವಾಪಾಯವಿದ್ದು, ಸರ್ಕಾರಿ ವೈದ್ಯರ ಅಥವಾ ಮಾನ್ಯತೆ ಪಡೆದ ಆಸ್ಪತ್ರೆಯ ವೈದ್ಯರ ಸಲಹೆಯ ಮೇರೆಗೆ ತುರ್ತು ಚಿಕಿತ್ಸೆಯ ಅಗತ್ಯವಿರುವ ಬೇರೆ ಯಾವುದೇ ಅತಿ ವಿರಳ ಸಂದರ್ಭ;
6. ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಗೂ ಸರ್ಕಾರದಿಂದ ಮಾನ್ಯತೆ ಪಡೆದ ಆಸ್ಪತ್ರೆಗಳಲ್ಲಿ ಚಿಕಿತ್ಸೆಯು ಲಭ್ಯವಿಲ್ಲದಂತಹ ವಿಶೇಷ ಸಂದರ್ಭಗಳಲ್ಲಿ ಈ ಆಸ್ಪತ್ರೆಗಳ ಸಕ್ಷಮ ಆಸ್ಪತ್ರೆ ಪ್ರಾಧಿಕಾರದ ಶಿಫಾರಸ್ಸಿನ ಮೇರೆಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಸಂದರ್ಭ.

4. ಈ ಮೇಲಿನ ಅಂಶಗಳೊಂದಿಗೆ ಆರ್ಥಿಕ ಇಲಾಖೆಯ ದಿ:20.01.2012ರ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2012ರಲ್ಲಿನ ಸೂಚನೆಗಳನ್ನೂ ಸಹ ಕಟ್ಟುನಿಟ್ಟಾಗಿ ಪಾಲಿಸಿ, ಸರ್ಕಾರಿ ನೌಕರರು ಅಥವಾ ಅವರ ಕುಟುಂಬ ಸದಸ್ಯರು ಮಾನ್ಯತೆ ಪಡೆಯದ ಖಾಸಗಿ ಆಸ್ಪತ್ರೆಗಳಲ್ಲಿ ಪಡೆದ ವೈದ್ಯಕೀಯ ಚಿಕಿತ್ಸಾ ಸ್ವರೂಪ ಮತ್ತು ಚಿಕಿತ್ಸೆ ಪಡೆದ ಸಂದರ್ಭ ಹಾಗೂ ಸನ್ನಿವೇಶಗಳ ವಿವರಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಕ್ಲೇಮಿನ ನೈಜತೆಯ ಬಗ್ಗೆ ಅಗತ್ಯವಿದ್ದಲ್ಲಿ ಸೂಕ್ತ ತನಿಖೆ ನಡೆಸಿ, ಸರ್ಕಾರಿ ನೌಕರರು ಸಲ್ಲಿಸಿರುವ ಕ್ಲೇಮು ಮೇಲೆ ತಿಳಿಸಿರುವ ಸಂದರ್ಭಗಳ ವ್ಯಾಪ್ತಿಯಲ್ಲಿ ಬರುವುದನ್ನು ಖಚಿತಪಡಿಸಿಕೊಂಡು, ಕ್ಲೇಮು ಸಮರ್ಥನೀಯವೆಂದು ಕಂಡು ಬಂದಲ್ಲಿ ಮಾತ್ರ ಇಲಾಖಾ ಮುಖ್ಯಸ್ಥರು ತಮ್ಮ ನಿರ್ದಿಷ್ಟ ಶಿಫಾರಸ್ಸಿನೊಂದಿಗೆ ಸಂಬಂಧಪಟ್ಟ

ಮುಂದುವರಿದಿದೆ.......3

ಸಚಿವಾಲಯದ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು. ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳೂ ಸಹ ತಮ್ಮ ಹಂತದಲ್ಲಿ ಪೂರ್ಣ ಪರಿಶೀಲನೆಯ ನಂತರವೇ ವೈದ್ಯಕೀಯ ವೆಚ್ಚ ಮರುಪಾವತಿ ಪ್ರಕರಣವು ವಿಶೇಷ ಪ್ರಕರಣವೆಂದು ಪರಿಗಣಿಸಬಹುದಾದ ಅಪವಾದಾತ್ಮಕ ಸಂದರ್ಭವೆಂದು ಧೃಢಪಟ್ಟಲ್ಲಿ ಮಾತ್ರ ಕಾರಣಗಳನ್ನು ದಾಖಲಿಸಿ ನಿಯಮಗಳ ಸಡಿಲಿಕೆಯ ಅಧಿಕಾರವನ್ನು ಚಲಾಯಿಸಿ ವೈದ್ಯಕೀಯ ವೆಚ್ಚದ ಮರುಪಾವತಿಗೆ ಪರಿಗಣಿಸುವುದು.

5. ಮರುಪಾವತಿಸುವ ಅರ್ಹತಾ ಮೊತ್ತವು ರೂ. 2.00 ಲಕ್ಷಗಳನ್ನು ಮೀರಿದ ಪ್ರಕರಣಗಳಲ್ಲಿಯೂ ಸಹ ಈ ಮೇಲೆ ತಿಳಿಸಿರುವಂತೆಯೇ ಪರಿಶೀಲಿಸಿ, ಇಲಾಖಾ ಮುಖ್ಯಸ್ಥರು ತಮ್ಮ ನಿರ್ದಿಷ್ಟ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಗಳನ್ನು ನೇರವಾಗಿ ಸಿ.ಆ.ಸು. ಇಲಾಖೆ(ಸೇವಾ ನಿಯಮಗಳು)ಗೆ ಸಲ್ಲಿಸದೇ ಕಡ್ಡಾಯವಾಗಿ ಸಂಬಂಧಪಟ್ಟ ಸಚಿವಾಲಯದ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾಯದರ್ಶಿಗಳಿಗೆ ಸಲ್ಲಿಸತಕ್ಕದ್ದು. ಹಾಗೂ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳೂ ಸಹ ತಮ್ಮ ಹಂತದಲ್ಲಿ ಪೂರ್ಣ ಪರಿಶೀಲನೆಯ ನಂತರ ವೈದ್ಯಕೀಯ ವೆಚ್ಚ ಮರುಪಾವತಿ ಪ್ರಕರಣವು ವಿಶೇಷ ಪ್ರಕರಣವೆಂದು ಪರಿಗಣಿಸಬಹುದಾದ ಅಪವಾದಾತ್ಮಕ ಸಂದರ್ಭವೆಂದು ಧೃಢಪಟ್ಟಲ್ಲಿ ಮಾತ್ರ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸಿ.ಆ.ಸು.ಇಲಾಖೆ (ಸೇವಾ ನಿಯಮಗಳು)ಗೆ ಕಳುಹಿಸಲು ಕ್ರಮ ಕೈಗೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ದಿನಾಂಕ: 20.09.2014ರ ಟಿಪ್ಪಣಿ ಸಂಖ್ಯೆ: ಆಇ 481 ಆನಿ 2014ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಉಮಾ ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

**ಇವರಿಗೆ:**

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಹೊರ ವಲಯ ಮುದ್ರಣಾಲಯ ಯೂನಿಟ್-2, ಮೈಸೂರು ರಸ್ತೆ, ಬೆಂಗಳೂರು- ಇದನ್ನು ಕರ್ನಾಟಕ ರಾಜ್ಯ ಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಸೇವಾನಿಯಮಗಳು-2), ಕೊಠಡಿ ಸಂಖ್ಯೆ: 30, ವಿಧಾನ ಸೌಧ, ಬೆಂಗಳೂರು-560 001 ಇವರಿಗೆ ಒದಗಿಸಲು **(ಮುಖ ಪತ್ರದೊಂದಿಗೆ)**

**ಪ್ರತಿಗಳು:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

ಮುಂದುವರಿದಿದೆ......4

3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
4. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ರಾಜಭವನ, ಬೆಂಗಳೂರು.
5. ~~ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.~~
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
7. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತು, ವಿಧಾನ ಸೌಧ, ಬೆಂಗಳೂರು.
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
9. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
10. ಎಲ್ಲಾ ಪಾದೇಶಿಕ ಆಯುಕ್ತರು.
11. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
12. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-9.
13. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-9.
14. ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತ್ರಿ ರಸ್ತೆ, ಬೆಂಗಳೂರು-560 009.
15. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಆಸ್ಪತ್ರೆಗಳ ಜಿಲ್ಲಾ ವೈದ್ಯಾಧಿಕಾರಿಗಳು.
16. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
17. ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009.
18. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
19. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
20. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
21. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
22. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು
23. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು